# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 613 (695) |
| ಸದಸ್ಯರ ಹೆಸರು | ಶ್ರೀ ಎಸ್.ಎಲ್. ಭೋಜೇಗೌಡ<br>(ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 19.09.2022 |
| ಉತ್ತರಿಸಬೇಕಾದವರು | ಉನ್ನತ ಶಿಕ್ಷಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನ ಎಷ್ಟು; ಈ ವೇತನವನ್ನು ಹೆಚ್ಚು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ರಲ್ಲಿ ಮತ್ತು ತಿದ್ದುಪಡಿ ಆದೇಶ ದಿನಾಂಕ:24.01.2022ರಲ್ಲಿ ಅತಿಥಿ ಉಪನ್ಯಾಸಕರಿಗೆ ಈ ಹಿಂದೆ ಕಲಾ, ವಾಣಿಜ್ಯ ವಿಭಾಗಕ್ಕೆ ವಾರಕ್ಕೆ ಗರಿಷ್ಠ 8 ಗಂಟೆ ಕಾರ್ಯಭಾರ ಮತ್ತು ವಿಜ್ಞಾನ ವಿಭಾಗಕ್ಕೆ ವಾರಕ್ಕೆ ಗರಿಷ್ಠ 10 ಗಂಟೆಗಳ ಕಾರ್ಯಭಾರಕ್ಕೆ ಬದಲಾಗಿ, ಗರಿಷ್ಠ ಕಲಾ, ವಾಣಿಜ್ಯ ವಿಭಾಗಕ್ಕೆ 15 ಮತ್ತು ವಿಜ್ಞಾನ ವಿಭಾಗಕ್ಕೆ ಗರಿಷ್ಠ 19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು 2021-22ನೇ ಶೈಕ್ಷಣಿಕ ಸಾಲಿನಿಂದ ಈ ಕೆಳಕಂಡಂತೆ ಹೆಚ್ಚಿಸಲಾಗಿದೆ.<br><br>ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)<br>ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)<br>ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)<br>(ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ) |
| (ಆ) | ಈ ಪದವಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಇರುವ ತೊಂದರೆಗಳಾದ ಹೆಚ್ಚು ಕಾರ್ಯಭಾರ ಹಾಗೂ ದೂರದ ಕಾಲೇಜುಗಳಲ್ಲಿ ಉಪನ್ಯಾಸಕರಾಗಿ ಕೆಲಸ ಮಾಡಲು ತೊಂದರೆ ಯಾಗುತ್ತಿರುವುದರಿಂದ ಇವರಿಗೆ | 2021-22ನೇ ಶೈಕ್ಷಣಿಕ ಸಾಲಿನಲ್ಲಿ ಗರಿಷ್ಠ ಕಲಾ, ವಾಣಿಜ್ಯ ವಿಭಾಗಕ್ಕೆ 15 ಮತ್ತು ವಿಜ್ಞಾನ ವಿಭಾಗಕ್ಕೆ ಗರಿಷ್ಠ 19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಅವರ ಹಿಂದಿನ ಸೇವಾ ಅನುಭವ ಹಾಗೂ ವಿದ್ಯಾರ್ಹತೆಯನ್ನು ಆಧರಿಸಿ, ಈ ಕೆಳಕಂಡ ಮಾನದಂಡಗಳನ್ವಯ ರಾಜ್ಯವ್ಯಾಪಿ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಿ ಕೇಂದ್ರಿಕೃತ ಆನ್‌ಲೈನ್ ಕೌನ್ಸಲಿಂಗ್ ಮೂಲಕ ನೇಮಿಸಿಕೊಳ್ಳಲಾಗಿದೆ. |

<table>
<tr>
<td></td>
<td>ಅನುಕೂಲಕರ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?</td>
<td>
<table>
<tr><th>ಕ್ರ. ಸಂ.</th><th>ವಿದ್ಯಾರ್ಹತೆ</th><th>ಗರಿಷ್ಠ ಅಂಕ ಗಳು</th></tr>
<tr><td>1.</td><td>ವಿದ್ಯಾರ್ಹತೆ:<br>ಅಭ್ಯರ್ಥಿಯು ಎರಡು ವರ್ಷ ಸ್ನಾತಕೋತ್ತರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 25%ನ್ನು ಗಣನೆಗೆ ತೆಗೆದುಕೊಳ್ಳುವುದು.<br>(ಉದಾ: ಅಭ್ಯರ್ಥಿಯು ಸ್ನಾತಕೋತ್ತರ ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ ಅದರ ಶೇಕಡ 25ರಷ್ಟು ಭಾಗವನ್ನು ಅಂದರೆ 15 ಅಂಕಗಳು ಎಂಬುದಾಗಿ ಗಣನೆಗೆ ತೆಗೆದುಕೊಳ್ಳುವುದು).</td><td>25</td></tr>
<tr><td>2.</td><td>ಹೆಚ್ಚುವರಿ ವಿದ್ಯಾರ್ಹತೆ:<br>1) ಪಿಹೆಚ್.ಡಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>2)ಎನ್ಇಟಿ/ಕೆ-ಸೆಟ್/ಎಸ್ಎಲ್ಇಟಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>3) ಎಂ.ಫಿಲ್. ವಿದ್ಯಾರ್ಹತೆ ಪಡೆದಿದ್ದಲ್ಲಿ</td><td>12<br>09<br>06</td></tr>
<tr><td>3.</td><td>ಅನುಭವ:<br>ಹಿಂದಿನ ವರ್ಷಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಾತ್ರ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 16 ವರ್ಷಗಳಿಗೆ 48 ಅಂಕಗಳನ್ನು ಮಿತಿಗೊಳಿಸುವುದು. (ಪ್ರತಿ ಶೈಕ್ಷಣಿಕ ವರ್ಷದ ಪೂರ್ಣ ಅವಧಿ ಸೇವೆಗೆ 3 ಅಂಕಗಳು, ಶೈಕ್ಷಣಿಕ ವರ್ಷದಲ್ಲಿ 1 ಸೆಮಿಸ್ಟರ್ ನಲ್ಲಿ ಮಾತ್ರ ಸೇವೆ ಸಲ್ಲಿಸಿದ್ದರೆ 1.5 ಅಂಕಗಳು)</td><td>48</td></tr>
<tr><td></td><td>ಒಟ್ಟು</td><td>100</td></tr>
<tr><td></td><td colspan="2">ಸೂಚನೆ: ವಿಕಲಚೇತನ ಅಭ್ಯರ್ಥಿಗಳಿಗೆ 10 ಅಂಕಗಳನ್ನು ಹೆಚ್ಚುವರಿಯಾಗಿ ನೀಡುವುದು.</td></tr>
</table>
ರಾಜ್ಯವ್ಯಾಪಿ ಮೆರಿಟ್ ಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ 2021-22ನೇ ಸಾಲಿನಲ್ಲಿ 8 ಸುತ್ತಿನ ಆನ್‌ಲೈನ್ ಕೌನ್ಸಲಿಂಗ್ ನಡೆಸಲಾಗಿದ್ದು, ಅಭ್ಯರ್ಥಿಗಳು ಕೌನ್ಸಲಿಂಗ್‌ನಲ್ಲಿ ತಮಗೆ ಬೇಕಾಗಿರುವ ಸ್ಥಳ/ ಕಾಲೇಜುಗಳನ್ನು ಆಯ್ಕೆ ಮಾಡಿಕೊಳ್ಳಲು ಮುಕ್ತ ಅವಕಾಶವನ್ನು ನೀಡಲಾಗಿದೆ.<br><br>
ಅದರಂತೆ, ಅತಿಥಿ ಉಪನ್ಯಾಸಕರು ಆನ್‌ಲೈನ್ ಕೌನ್ಸಲಿಂಗ್ ಮೂಲಕ ಸ್ಥಳ/ ಕಾಲೇಜು ಆಯ್ಕೆ ಮಾಡಿಕೊಂಡಿರುವ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ಹಾಜರಾಗಿರುತ್ತಾರೆ.
</td>
</tr>
</table>

**ಇಡಿ 224 ಡಿಸಿಇ 2022**

**(ಡಾ. ಅಶ್ವಥ್ ನಾರಾಯಣ ಸಿ.ಎನ್.)**

**ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**